# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 723 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22-09-2022 |
| ಉತ್ತರಿಸುವವರು | : | ಸನ್ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ವನ್ಯಜೀವಿ-ಮಾನವ ಸಂಘರ್ಷ ಸತತವಾಗಿ ಹೆಚ್ಚುತ್ತಲೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಇತ್ತೀಚಿನ ವರ್ಷಗಳಲ್ಲಿ ವನ್ಯಜೀವಿ-ಮಾನವ ಸಂಘರ್ಷ ಸತತವಾಗಿ ಹೆಚ್ಚುತ್ತಲೇ ಇರುವುದಕ್ಕೆ ಸರ್ಕಾರ ಗುರುತಿಸಿರುವ ವೈಜ್ಞಾನಿಕ ಕಾರಣಗಳೇನು; | ರಾಜ್ಯದಲ್ಲಿ ಮಾನವ-ವನ್ಯಪ್ರಾಣಿ ಸಂಘರ್ಷಕ್ಕೆ ಕಾರಣಗಳು ಈ ಕೆಳಕಂಡಂತಿವೆ:-<br>1 ಆನೆ, ಹುಲಿ, ಚಿರತೆ, ಕರಡಿ, ಕಾಡು ಹಂದಿ ಮತ್ತು ಮಂಗಗಳು ಒಳಗೊಂಡಂತೆ ಕಾಡು ಪ್ರಾಣಿಗಳ ಸಂತತಿಯಲ್ಲಿ ಹೆಚ್ಚಳ.<br>2 ಅಭಿವೃದ್ಧಿ ಚಟುವಟಿಕೆಗಳು ಮತ್ತು ಕೃಷಿಯ ಹರಡುವಿಕೆಯಿಂದಾಗಿ ಅರಣ್ಯ ಆವಾಸಸ್ಥಾನಗಳ ವಿಘಟನೆ.<br>3 ಅರಣ್ಯ ಪ್ರದೇಶಗಳಲ್ಲಿ ಲಂಟಾನಾದಂತಹ ಆಕ್ರಮಣಕಾರಿ ಕಳೆಗಳು ವೇಗವಾಗಿ ಹರಡುವುದರಿಂದ ಮೇವಿನ ಲಭ್ಯತೆ ಕಡಿಮೆ.<br>4 ಅರಣ್ಯ ಪ್ರದೇಶಗಳ ಅಂಚಿನಲ್ಲಿರುವ ಖಾಸಗಿ ಜಮೀನುಗಳಲ್ಲಿ ಕಾಡಾನೆ ಒಳಗೊಂಡಂತೆ ಇತರೆ ವನ್ಯಪ್ರಾಣಿಗಳನ್ನು ಆಕರ್ಷಿಸುವ ಬೆಳೆಗಳಾದ ಭತ್ತ, ತೆಂಗು, ಬಾಳೆ, ಹಲಸು ಇತ್ಯಾದಿ ಬೆಳೆಗಳನ್ನು ಬೆಳೆಸುವುದರಿಂದ ವನ್ಯಪ್ರಾಣಿ ದಾಳಿ ಹೆಚ್ಚಳ ಅಗುತ್ತಿರುವುದು ಗಮನಕ್ಕೆ ಬಂದಿದೆ<br>5 ಆನೆ ವಲಯ ಪ್ರದೇಶಗಲ್ಲಿನ ಭೂ ಪ್ರದೇಶಗಳಲ್ಲಿನ ಬದಲಾವಣೆ.<br>6 ಕಾಡಾನೆಗಳು ಹಿಂದಿನಿಂದಲೂ ಸಂಚರಿಸುತ್ತಿದ್ದ ದಾರಿಗಳಿಗೆ (ಮೊಗಸಾಲೆಗಳಿಗೆ) ಅಡಚಣೆ ಉಂಟಾಗಿರುತ್ತದೆ. |

ಇ) ಸರ್ಕಾರ ಗುರುತಿಸಿರುವ ವೈಜ್ಞಾನಿಕ ಕಾರಣಗಳನ್ನು ಗಮನದಲ್ಲಿ ಇಟ್ಟುಕೊಂಡು ವನ್ಯಜೀವಿ-ಮಾನವ ಸಂಘರ್ಷವನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ರೂಪಿಸಿರುವ ಶಾಶ್ವತ ಪರಿಹಾರ ಕ್ರಮಗಳೇನು;

ರಾಜ್ಯದಲ್ಲಿ ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣಕ್ಕಾಗಿ ಕೈಗೊಂಡಿರುವ ಕ್ರಮಗಳ ವಿವರಗಳು ಕೆಳಕಂಡಂತಿವೆ:-

- ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ವಿವರಗಳು ಈ ಕೆಳಕಂಡಂತಿವೆ.

| ಕ್ರ ಸಂ | ಬ್ಯಾರಿಕೇಡ್ ವಿವರ | ವಿಸ್ತೀರ್ಣ (ಕಿ.ಮೀ.ಗಳಲ್ಲಿ) |
|---|---|---|
| 1 | ರೈಲ್ವೆ ಬ್ಯಾರಿಕೇಡ್ | 217.438 |
| 2 | ಆನೆ ತಡೆಕಂದಕ | 1006.719 |
| 3 | ಸೋಲಾರ್ ತಂತಿಬೇಲಿ | 1003.357 |
| 4 | ತೂಗುವ ಸೋಲಾರ್ ತಂತಿಬೇಲಿ | 78.50 |

- ಕ್ಷಿಪ್ರ ಸ್ಪಂದನ ತಂಡಗಳನ್ನು ಅರಣ್ಯದ ಸುತ್ತಮುತ್ತ ಕಾಡಾನೆ/ ವನ್ಯಪ್ರಾಣಿ ಹಾವಳಿ ಉಂಟಾದ ಸಂದರ್ಭಗಳಲ್ಲಿ ತುರ್ತಾಗಿ ಪರಿಸ್ಥಿತಿಯನ್ನು ನಿಭಾಯಿಸಲು ಸಂದರ್ಭಕ್ಕನುಸಾರವಾಗಿ ಸ್ಥಾಪಿಸಿ, ಕಾಡಾನೆ / ವನ್ಯಪ್ರಾಣಿಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರತಿ ಕ್ಷಿಪ್ರ ಸ್ಪಂದನ ತಂಡದಲ್ಲಿ ಒಂದು ವಾಹನ ಸೇರಿದಂತೆ ಒಬ್ಬ ವಲಯ ಉಪ ವಲಯ ಅರಣ್ಯಾಧಿಕಾರಿ ಹಾಗೂ ನಾಲ್ಕು ಜನ ಹೊರಗುತ್ತಿಗೆಯ ರಕ್ಷಣಾ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ತಂಡಗಳು ಈ ಕೆಳಕಂಡ ಪ್ರಮುಖ ಕರ್ತವ್ಯಗಳನ್ನು ಕೈಗೊಳ್ಳಲಾಗುತ್ತಿರುತ್ತವೆ.

1. ಮಾನವ-ವನ್ಯಜೀವಿ ಸಂಘರ್ಷ ತಡೆಗಟ್ಟುವುದು.
2. ಕಾಡಾನೆಗಳು / ವನ್ಯಪ್ರಾಣಿಗಳು ನಾಡಿಗೆ ಬಾರದಂತೆ ಅವುಗಳ ಚಲನ-ವಲನಗಳನ್ನು ಪತ್ತೆಹಚ್ಚಿ, ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳುವುದು.
3. ರೈತರು, ಶಾಲಾ ಮಕ್ಕಳು, ಸಾರ್ವಜನಿಕರಿಗೆ ಹಾಗೂ ಕಾಡಂಚಿನ ಗ್ರಾಮಸ್ಥರಿಗೆ ಕಾಡಾನೆಗಳಿಂದ ಯಾವುದೇ ಅವಘಡ ಸಂಭವಿಸದಂತೆ ನಿಯಂತ್ರಿಸುವುದು
4. ರಾತ್ರಿ ಸಮಯದಲ್ಲಿ ಗಸ್ತು ಕಾರ್ಯ ಕೈಗೊಳ್ಳುವುದು
5. ಅರಣ್ಯ ಪ್ರದೇಶದಲ್ಲಿ ಉಂಟಾಗುವ ಬೆಂಕಿ ಅವಘಡಗಳನ್ನು ನಿಯಂತ್ರಿಸುವುದು.

ಮುಂದುವರೆದು, ಕ್ಷಿಪ್ರ ಕಾರ್ಯಪಡೆಯನ್ನು ಸಂದರ್ಭಕ್ಕನುಸಾರವಾಗಿ ರಚಿಸಿ ಮಾನವ-ವನ್ಯಪ್ರಾಣಿ ಸಂಘರ್ಷ ಅದರಲ್ಲೂ ಕಾಡಾನೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಸಂದರ್ಭಕ್ಕೆ ಅನುಸಾರವಾಗಿ ಸದರಿ ಕಾರ್ಯಪಡೆ ಮೂಲಕ ಸಂಘರ್ಷವನ್ನು ಆಗಿಂದಾಗ್ಗೆ ತಡೆಗಟ್ಟಲಾಗುತ್ತಿದೆ.

...3

| | | |
|---|---|---|
| | | • ರಾಜ್ಯದಲ್ಲಿ ಅರಣ್ಯ ಸಂಪತ್ತು ಮತ್ತು ವನ್ಯಜೀವಿ ಸಂರಕ್ಷಣಾ ಕಾರ್ಯಗಳು ಮುಖ್ಯವಾಗಿ ವನ್ಯಜೀವಿ ಸಂಕುಲಗಳನ್ನು ಬೇಟೆಗಾರರಿಂದ ರಕ್ಷಿಸಿ ನಿರ್ವಹಿಸುವ ಕೆಲಸಗಳಿಗಾಗಿ ವನ್ಯಜೀವಿ ಸಂರಕ್ಷಿತ ಪ್ರದೇಶ, ಹುಲಿ ಸಂರಕ್ಷಿತ ಪ್ರದೇಶಗಳು ಹಾಗೂ ಕೆಲವು ಪ್ರಾದೇಶಿಕ ವಿಭಾಗಗಳಲ್ಲಿ ಕಳ್ಳ ಬೇಟೆ ತಡೆ ಶಿಬಿರಗಳನ್ನು ಅತ್ಯಂತ ಸೂಕ್ಷ್ಮ ಪ್ರದೇಶಗಳಲ್ಲಿ ಸ್ಥಾಪಿಸಿ ನಿರ್ವಹಿಸಲಾಗುತ್ತಿದೆ.<br>• ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ<br>• ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಚ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.<br>• ವನ್ಯಪ್ರಾಣಿಗಳು ಅರಣ್ಯ ಪ್ರದೇಶದಿಂದ ಸಾರ್ವಜನಿಕರ ವಸಾಹತುಗಳಿಗೆ ನುಗ್ಗಿ ಹಾವಳಿ ನಡೆಸುವುದನ್ನು ನಿಯಂತ್ರಿಸಲು ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ನಿರ್ವಹಿಸಲಾಗುತ್ತಿದೆ.<br>• ಕಾಡಾನೆಗಳ ಚಲನವಲನ ಕುರಿತು ಮಾಹಿತಿ ನೀಡುವ ಮುನ್ನೆಚ್ಚರಿಕೆ ವ್ಯವಸ್ಥೆ(Early Warning System) ತಂತ್ರಾಂಶವನ್ನು ರೂಪಿಸಲಾಗಿದೆ.<br>• ಕಾಡಾನೆ ಗುಂಪಿನಲ್ಲಿರುವ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ, ಆನೆಗಳ ಚಲನ-ವಲನಗಳ ಬಗ್ಗೆ ನಿಗಾ ವಹಿಸಲಾಗುತ್ತಿದ್ದು, ಸದರಿ ಆನೆಗಳ ಚಲನ-ವಲನಗಳ ಮಾಹಿತಿಯನ್ನು ಸ್ಥಳೀಯ ಜನರಿಗೆ SMS/ WhatsApp ಮೂಲಕ ಮುಂಜಾಗ್ರತ ಕ್ರಮವಾಗಿ ತಿಳಿಸಲಾಗುತ್ತಿರುತ್ತದೆ. ಇದರಿಂದ ಸಾರ್ವಜನಿಕರು ಪೂರ್ವ ಮಾಹಿತಿ ಪಡೆದು ಎಚ್ಚರಿಕೆ ವಹಿಸಲು ಸಾಧ್ಯವಾಗುತ್ತದೆ.<br>• ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. |

| | | |
|---|---|---|
| | | • ಕಾಡು ಪ್ರಾಣಿಗಳ ಚಲನವಲನದ ಬಗ್ಗೆ ಸಾರ್ವಜನಿಕರಿಂದ ಮಾಹಿತಿ ಪಡೆಯಲು ಮತ್ತು ತಕ್ಷಣವೇ ಪ್ರತಿಕ್ರಿಯಿಸಲು 1926 ಸಹಾಯವಾಣಿಯನ್ನು ಈಗಾಗಲೇ ಸ್ಥಾಪಿಸಲಾಗಿದ್ದು, 24/7 ಮೂಲಕ ಹಗಲು ರಾತ್ರಿ ಕಾರ್ಯ ನಿರ್ವಹಿಸಲಾಗುತ್ತಿದೆ. |

**ಸಂಖ್ಯೆ: ಅಪಜೀ 150 ಎಫ್‌ಡಬ್ಲ್ಯೂಎಲ್ 2022**

**(ಬಸವರಾಜ ಬೊಮ್ಮಾಯಿ)**
ಮುಖ್ಯಮಂತ್ರಿ